96

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಮೈಲಾರ್ ಶುಗರ್ಸ್ ಲಿಮಿಟೆಡ್ ಇವರಿಗೆ 25 ಮೆ.ವ್ಯಾ. ಸಾಮರ್ಥ್ಯದ ಸಹ–ವಿದ್ಯುತ್ ಉತ್ಪಾದನೆ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಬಗ್ಗೆ.

ಓದಲಾಗಿದೆ:
1) ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆದೇಶ ಸಂಖ್ಯೆ: ಸಿಐ 3 ಎಸ್‌ಪಿಐ 2014, ದಿನಾಂಕ: 03.01.2014 ಮತ್ತು 10.5.2016.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: M-96.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ★ ಬೆಂಗಳೂರು ★ ಸಂ. 1465 ದಿನಾಂಕ 13/6/16

* * *

**ಪ್ರಸ್ತಾವನೆ: –**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶಗಳಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಮೆ: ಮೈಲಾರ್ ಶುಗರ್ಸ್ ಲಿಮಿಟೆಡ್ ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನಲ್ಲಿ 5000 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಗೆ 25 ಮೆ.ವ್ಯಾ. ಸಾಮರ್ಥ್ಯದ ಸಹ–ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡಲಾಗಿರುತ್ತದೆ.

ಮೆ: ಮೈಲಾರ್ ಶುಗರ್ಸ್ ಲಿಮಿಟೆಡ್ ರವರು ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನ ಹಿರೇಹಡಗಲಿ ಹೋಬಳಿಯ ಬೇರಬ್ಬಿ ಗ್ರಾಮದಲ್ಲಿ 5000 ಟಿಸಿಡಿ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸುವುದರೊಂದಿಗೆ 25 ಮೆ.ವ್ಯಾ. (Gross) ಸಾಮರ್ಥ್ಯದ ಸಹ–ವಿದ್ಯುತ್ ಉತ್ಪಾದನೆ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಸಹ–ವಿದ್ಯುತ್ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನಲ್ಲಿ ಋತುವಿನ ಕಾಲದಲ್ಲಿ 13.41 ಮೆ.ವ್ಯಾ. ಹಾಗೂ ಋತುವಲ್ಲದ ಕಾಲದಲ್ಲಿ 15.68 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಅಳವಡಿಸುವುದಾಗಿ ತಿಳಿಸಿ ಅವಶ್ಯವಿರುವ ದಾಖಲೆಗಳೊಂದಿಗೆ ನಿಯಮಾನುಸಾರ ಪಾವತಿಸಬಹುದಾದ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಪಾವತಿಸಿ, ಯೋಜನೆಯ ಅನುಷ್ಠಾನವನ್ನು 18 ತಿಂಗಳೊಳಗಾಗಿ ಪೂರ್ಣಗೊಳಿಸುವುದಾಗಿ ತಿಳಿಸಿದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಅನುಮತಿ ನೀಡುವ ಕುರಿತು ತಾಂತ್ರಿಕ ವಿವರಗಳೊಂದಿಗೆ ಕಂಪನಿಯವರು ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕ ಕಡತ ಪದ್ಧತಿಯಡಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಎನ್ 135 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 08.6.2016.**

AGM (BCC) 14/6/16

GM (Tech) I/C KREDL

ಮೆ: ಮೈಲಾರ್ ಶುಗರ್ಸ್ ಲಿಮಿಟೆಡ್ ರವರು ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನ ಹಿರೇಹಡಗಲಿ ಹೋಬಳಿಯ ಬೇರಬ್ಬಿ ಗ್ರಾಮದಲ್ಲಿ ಸ್ಥಾಪಿಸಲಾಗುತ್ತಿರುವ 5000 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯೊಂದಿಗೆ 25 ಮೆ.ವ್ಯಾ. (Gross) ಸಾಮರ್ಥ್ಯದ ಸಹ–ವಿದ್ಯುತ್ ಘಟಕವನ್ನು ಸ್ಥಾಪಿಸಲು ಹಾಗೂ ಸದರಿ ಸಹ–ವಿದ್ಯುತ್ ಘಟಕದಿಂದ ಉತ್ಪಾದಿಸಲಾಗುವ ವಿದ್ಯುತ್ತಿನಲ್ಲಿ ಋತುವಿನ ಕಾಲದಲ್ಲಿ 13.41 ಮೆ.ವ್ಯಾ. ಹಾಗೂ ಋತುವಲ್ಲದ ಕಾಲದಲ್ಲಿ 15.68 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಅಳವಡಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ 'ನಿರಾಕ್ಷೇಪಣೆಯನ್ನು' ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;

--2)

2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ / ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಂಡು ಹೆಚ್ಚುವರಿ ವಿದ್ಯುತ್ ಮಾರಾಟ ಮಾಡುವ ಕುರಿತು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಮಾಡಿಕೊಳ್ಳಲು ಅಥವಾ ಮುಕ್ತ ಮಾರುಕಟ್ಟೆ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂ-9.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂ-1.
5 ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
6 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಳ್ಳಾರಿ ಜಿಲ್ಲೆ, ಬಳ್ಳಾರಿ.
7 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ.
8 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
9 M/s. Mylar Sugars Limited, No.6, Laxmi park, Behind New Bus Stand, Hubli – 580030.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

MD Kredl